ಈ) ಸರಿಯಾದ ನೀತಿಯನ್ನು ಪ್ರಕಟಿಸಿ, ಸಾರ್ವಜನಿಕರಿಗೆ ಇರುವ ಗೊಂದಲವನ್ನು ನಿವಾರಣೆ ಮಾಡಲಾಗುವುದೇ?

ಶ್ರೀ ಬಿ. ರಮಾನಾಥ ರೈ (ಸಾರಿಗೆ ಸಚಿವರು) :

ಅ) ಪರಿಶೀಲನೆಯಲ್ಲಿದೆ.

ಆ) ನಿಮಾನ್ಸ್ ವೈದ್ಯರುಗಳು ನಡೆಸಿದ ಅಧ್ಯಯನ ಹಾಗೂ ಡಾಸುದರ್ಶನ್ ಕಮಿಟಿಯ ವರದಿಯಲ್ಲಿ ದ್ವಿಚಕ್ರ ವಾಹನ ಚಾಲಕರು ಶಿರಸ್ತ್ರಾಣ ಧರಿಸುವುದನ್ನು ಕಡ್ಡಾಯಗೊಳಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಇ) ದಿನಾಂಕ 17–08–1995ರ ಸರ್ಕಾರಿ ಆದೇಶದಲ್ಲಿ ದ್ವಿಚಕ್ರ ವಾಹನ ಸವಾರರಿಗೆ ಹೆಲ್ಮೆಟ್ ಧರಿಸುವುದರಿಂದ ವಿನಾಯಿತಿ ನೀಡಿದ ನಂತರ ಸರ್ಕಾರ ಯಾವುದೇ ಬದಲಾವಣೆ ಮಾಡಿರುವುದಿಲ್ಲ, ಇದರಿಂದ ದ್ವಿಚಕ್ರ ವಾಹನ ಸವಾರರಿಗೆ ಯಾವುದೇ ತೊಂದರೆಯಾಗಿರುವುದಿಲ್ಲ.

ಈ) ದ್ವಿಚಕ್ರ ವಾಹನ ಸವಾರರಿಗೆ ತೊಂದರೆಯಾಗದಂತೆ ಮತ್ತು ಸಾರ್ವಜನಿಕರಿಂದ ಪುನಃ ಟೀಕೆ ಟಿಪ್ಪಣಿಗಳು ಬರದಿರುವ ಹಾಗೆ ಪರಿಶೀಲಿಸಿ ನಿರ್ದಾರ ತೆಗೆದುಕೊಳ್ಳಲಾಗುತ್ತದೆ.

ಗುಂಡ್ಲಪೇಟೆಯ ನ್ಯಾಯಾಲಯಕ್ಕೆ ಕಟ್ಟಡ ನಿರ್ಮಿಸುವುದು

2613(3165) ಶ್ರೀ ಮಹದೇವ ಪ್ರಸಾದ್ ಹೆಚ್.ಎಸ್. (ಗುಂಡ್ಲುಪೇಟೆ) : ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಗುಂಡ್ಲುಪೇಟೆ ಜೆ ಎಂ ಎಫ್ ಸಿ ನ್ಯಾಯಾಲಯಕ್ಕೆ ಸ್ವಂತ ಕಟ್ಟಡ ಇಲ್ಲದಿರುವುದರಿಂದ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದರೆ ಕಟ್ಟಡ ನಿರ್ಮಿಸಲು ಕೈಗೊಂಡಿರುವ ಕ್ರಮಗಳೇನು?

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :

ಅ) ಹೌದು

ಆ) 2003–04ನೇ ಸಾಲಿನ ಆಯವ್ಯಯ ಅಂದಾಜಿನಲ್ಲಿ ಈ ಕಾಮಗಾರಿಯನ್ನು ಸೇರಿಸಿರುವುದಿಲ್ಲ.

ಕೆ.ಎಸ್.ಆರ್.ಟಿ.ಸಿ. ನೌಕರರಿಗೆ ತರಬೇತಿ

2615(3167) ಶ್ರೀ ಮಹದೇವ ಪ್ರಸಾದ್ ಹೆಚ್.ಎಸ್. (ಗುಂಡ್ಲುಪೇಟೆ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ನೇಮಕವಾಗುವ 3 ಮತ್ತು 4ನೇ ದರ್ಜೆಯ ಹುದ್ದೆಗೆ ತರಬೇತಿ ಅವಧಿಯನ್ನು 2 ವರ್ಷಗಳಿಂದ 6 ತಿಂಗಳಿಗೆ ನಿಗಧಿಪಡಿಸಿರುವುದು ನಿಜವೇ;

ಆ) ಹಾಗಿದ್ದಲ್ಲಿ, ಇದು ರಾಜ್ಯದ ಎಲ್ಲಾ ಸಾರಿಗೆ ವಲಯಗಳಿಗೂ ಹಾಗೂ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಗೂ ಅನ್ವಯಿಸುತ್ತದೆಯೇ?

ಶ್ರೀ ರಮಾನಾಥ ರೈ (ಸಾರಿಗೆ ಸಚಿವರು) :

ಅ) ಹೌದು

ಆ) ಉಳಿದ ರಾಜ್ಯ ಸಾರಿಗೆ ನಿಗಮಗಳು ಸ್ವತಂತ್ರವಾಗಿರುವುದರಿಂದ, ಇಂತಹ ವಿಷಯಗಳಲ್ಲಿ ಅವರುಗಳೂ ಅಳವಡಿಸಿಕೊಂಡಲ್ಲಿ ಅವರಿಗೂ ಅನ್ವಯವಾಗುತ್ತದೆ.